**All India Radio: Bangalore**
**National Bulletin In Kannada**
**20.02.2025 7.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ದೆಹಲಿಯ ೯ನೇ ಮುಖ್ಯಮಂತ್ರಿಯಾಗಿ ರೇಖಾ ಗುಪ್ತ ಇಂದು ಪ್ರಮಾಣವಚನ
2. ನಾಳೆ ಪ್ರಧಾನಿಯಿಂದ ನವದೆಹಲಿಯ ಭಾರತ್ ಮಂಟಪಂ ನಲ್ಲಿ ಸೋಲ್ ಲೀಡರ್‌ಶಿಪ್ ಕಾನ್‌ಕ್ಲೇವ್ ಮೊದಲ ಆವೃತ್ತಿ ಉದ್ಘಾಟನೆ
3. ಹಮಾಸ್ ಜೊತೆ ೨ನೇ ಹಂತದ ಕದನ ವಿರಾಮ ಮಾತುಕತೆಗೆ ಪ್ರತಿನಿಧಿ ನೇಮಿಸಿದ ಇಸ್ರೇಲ್
4. ಐಸಿಸಿ ಚಾಂಪಿಯನ್ ಟ್ರೋಫಿ ಕ್ರಿಕೆಟ್ ; ದುಬೈನಲ್ಲಿ ಇಂದು ಭಾರತ-ಬಾಂಗ್ಲಾ ನಡುವೆ ಹಣಾಹಣಿ

<><><><>

ದೆಹಲಿಯ ೯ನೇ ಮುಖ್ಯಮಂತ್ರಿ ರೇಖಾ ಗುಪ್ತ ಅವರು, ನವದೆಹಲಿಯ ಐತಿಹಾಸಿಕ ರಾಮಲೀಲಾ ಮೈದಾನದಲ್ಲಿ ಇಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ನಿನ್ನೆ ಸಂಜೆ ನಡೆದ ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ರೇಖಾ ಗುಪ್ತ ಅವರನ್ನು ನಾಯಕರನ್ನಾಗಿ ಆಯ್ಕೆ ಮಾಡಿದ ನಂತರ ಅವರು, ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೇನಾ ಅವರನ್ನು ಭೇಟಿ ಮಾಡಿ, ಹೊಸ ಸರ್ಕಾರ ರಚನೆ ಹಕ್ಕು ಮಂಡಿಸಿದರು. ಲೆಫ್ಟಿನೆಂಟ್ ಗವರ್ನರ್ ಇಂದು ಅಪರಾಹ್ನ ೧೨.೩೫ಕ್ಕೆ ರೇಖಾ ಗುಪ್ತಾ ಅವರಿಗೆ ಗೋಪತ್ಯೆಯ ಪ್ರಮಾಣವಚನ ಹಾಗೂ ಗೋಪ್ಯತೆಯನ್ನು ಬೋಧಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಕೇಂದ್ರ ಸಚಿವರು ಹಾಗೂ ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಈ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ರೇಖಾ ಗುಪ್ತಾ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಶಾಲಿಮಾರ್ ಭಾಗ್ ಕ್ಷೇತ್ರದಿಂದ ಚುನಾಯಿತರಾಗಿದ್ದಾರೆ. ಅವರು, ೧೯೯೨ರಲ್ಲಿ ದೆಹಲಿ ವಿಶ್ವವಿದ್ಯಾಲಯದ ದೌಲತ್‌ರಾಮ್ ಕಾಲೇಜಿನಲ್ಲಿ ಎಬಿವಿಪಿಯೊಂದಿಗೆ ತಮ್ಮ ರಾಜಕೀಯ ಪಯಣ ಆರಂಭಿಸಿದರು. ನಂತರ ಅವರು, ದೆಹಲಿ ವಿಶ್ವವಿದ್ಯಾಲಯ ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿದ್ದರು. ದೆಹಲಿಯಲ್ಲಿ ಬಿಜೆಪಿ ಮಹಿಳಾ ಮೋರ್ಚಾದ ಪ್ರಧಾನಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಈ ನಡುವೆ ದೆಹಲಿ ನಿರ್ಗಮಿತ ಮುಖ್ಯಮಂತ್ರಿ ಅತಿಶಿ, ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿರುವ ಬಿಜೆಪಿ ನಾಯಕಿ ರೇಖಾ ಗುಪ್ತಾ ಅವರನ್ನು ಅಭಿನಂದಿಸಿದ್ದಾರೆ. ಚುನಾವಣಾ ಪ್ರಚಾರದ ಸಮಯದಲ್ಲಿ ನೀಡಿದ ಎಲ್ಲಾ ಭರವಸೆಗಳನ್ನು ಅವರು ಈಡೇರಿಸಲಿದ್ದಾರೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ.

ಸುಷ್ಮಾ ಸ್ವರಾಜ್, ಶೀಲಾ ದೀಕ್ಷಿತ್ ಹಾಗೂ ಅತಿಶಿ ನಂತರ ರೇಖಾ ಗುಪ್ತಾ ದೆಹಲಿಯ ನಾಲ್ಕನೇ ಮಹಿಳಾ ಮುಖ್ಯಮಂತ್ರಿಯಾಗಲಿದ್ದಾರೆ. ಅರವಿಂದ್ ಕೇಜ್ರಿವಾಲ್ ನೇತೃತ್ವದ ಎಎಪಿಯ ೧೦ ವರ್ಷಗಳ ಆಡಳಿತವನ್ನು ಕೊನೆಗೊಳಿಸಿ, ೨೭ ವರ್ಷಗಳ ನಂತರ ಬಿಜೆಪಿ ದೆಹಲಿಯಲ್ಲಿ ಅಧಿಕಾರಕ್ಕೆ ಮರಳಿದೆ.

<><><>

ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಗೊಂಡಿರುವ ರೇಖಾ ಗುಪ್ತಾ ಅವರನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಕೇಂದ್ರ ಸಚಿವರು ಹಾಗೂ ಬಿಜೆಪಿ ನಾಯಕರು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರೇಖಾ ಗುಪ್ತಾ ಅವರನ್ನು ಅಭಿನಂದಿಸಿರುವ ಗೃಹ ಸಚಿವ ಅಮಿತ್ ಶಾ ದೆಹಲಿಯನ್ನು ವಿಶ್ವದ ಉನ್ನತ ರಾಜಧಾನಿಗಳಲ್ಲಿ ಒಂದನ್ನಾಗಿಸಲು ಪ್ರಧಾನಿ ನರೇಂದ್ರ ಮೋದಿ ಕೈಗೊಂಡ ನಿರ್ಣಯದ ನಿಟ್ಟಿನಲ್ಲಿ ಹೊಸ ಮುಖ್ಯಮಂತ್ರಿ ಸಮರ್ಪಣಾ ಭಾವದಿಂದ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ನವದೆಹಲಿಯ ಭಾರತ್ ಮಂಟಪಂ ನಲ್ಲಿ ಸೋಲ್ ಲೀಡರ್‌ಶಿಪ್ ಶೃಂಗಸಭೆಯ ಮೊದಲ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಭೂತಾನ್ ಪ್ರಧಾನಿ ದಾಶೊ ಶೇರಿಂಗ್ ತೋಬ್ಗೆ ಅವರು, ಗೌರವಾನ್ವಿತ ಅತಿಥಿಯಾಗಿ ಪ್ರಧಾನ ಭಾಷಣ ಮಾಡಲಿದ್ದಾರೆ. ಎರಡು ದಿನಗಳ ಕಾಲ ನಡೆಯಲಿರುವ ಸೋಲ್ ಲೀಡರ್‌ಶಿಪ್ ಸಮ್ಮೇಳನದಲ್ಲಿ ರಾಜಕೀಯ, ಕ್ರೀಡೆ, ಕಲೆ, ಮಾಧ್ಯಮ, ಆಧ್ಯಾತ್ಮಿಕ ಜಗತ್ತು ಹಾಗೂ ಸಾರ್ವಜನಿಕ ನೀತಿ ವ್ಯವಹಾರದಂತಹ ವೈವಿಧ್ಯಮಯ ಕ್ಷೇತ್ರಗಳ ನಾಯಕರು ತಮ್ಮ ಸ್ಫೂರ್ತಿದಾಯಕ ಜೀವನಯಾತ್ರೆ ಕುರಿತು ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

<><><>

'ಆರ್‌ಬಿಐ ಡೇಟಾ' ಎಂಬ ಮೊಬೈಲ್ ಅಪ್ಲಿಕೇಷನ್ ಅನ್ನು ಭಾರತೀಯ ರಿಸರ್ವ್ ಬ್ಯಾಂಕ್ - ಆರ್‌ಬಿಐ ಪ್ರಾರಂಭಿಸಿದೆ.

ಇದು ಭಾರತೀಯ ಆರ್ಥಿಕತೆಗೆ ಸಂಬಂಧಿಸಿದ ಸ್ಥೂಲ ಆರ್ಥಿಕ ಮತ್ತು ಹಣಕಾಸು ಅಂಕಿ-ಅಂಶಗಳನ್ನು ಬಳಕೆದಾರ ಸ್ನೇಹಿ ಮತ್ತು ಆಕರ್ಷಕ ಸ್ವರೂಪದಲ್ಲಿ ನೀಡಲು ವಿನ್ಯಾಸಗೊಳಿಸಲಾಗಿದೆ. ಈ ಅಪ್ಲಿಕೇಷನ್ ಭಾರತೀಯ ಆರ್ಥಿಕತೆಗೆ ಸಂಬಂಧಿಸಿದ ೧೧ ಸಾವಿರಕ್ಕೂ ಹೆಚ್ಚು ವಿಭಿನ್ನ ಆರ್ಥಿಕ ದತ್ತಾಂಶಗಳಿಗೆ ಪ್ರವೇಶವನ್ನು ಒದಗಿಸುತ್ತದೆ. ಬಳಕೆದಾರರು ವಿಶ್ಲೇಷಣೆಗಾಗಿ ದತ್ತಾಂಶವನ್ನು ಡೌನ್‌ಲೋಡ್ ಮಾಡಬಹುದು. ಇದರಲ್ಲಿರುವ ಬ್ಯಾಂಕಿಂಗ್ ಔಟ್‌ಲೆಟ್ ವಿಭಾಗವು ಬಳಕೆದಾರರು ತಮ್ಮ ಸ್ಥಳದಿಂದ ೨೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಬ್ಯಾಂಕಿಂಗ್ ಸೌಲಭ್ಯವನ್ನು ಹುಡುಕಲು ಸಹಾಯ ಮಾಡುತ್ತದೆ ಎಂದು ಆರ್‌ಬಿಐ ತಿಳಿಸಿದೆ.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಮಣ್ಣು ಆರೋಗ್ಯ ಕಾರ್ಡ್ ಯೋಜನೆ ಜಾರಿಗೊಂಡು ನಿನ್ನೆಗೆ ೧೦ ವರ್ಷ ಪೂರ್ಣಗೊಂಡಿದೆ. ೨೦೧೫ರ ಫೆಬ್ರವರಿ ೧೯ರಂದು ರಾಜಸ್ಥಾನದ

ಸುರಪುರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ಯೋಜನೆಗೆ ಚಾಲನೆ ನೀಡಿದ್ದರು. ದೇಶದ ಎಲ್ಲಾ ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲು ತೀರ್ಮಾನಿಸಿ, ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಲಾಯಿತು. ಈ ಕಾರ್ಡ್‌ನಿಂದ ರೈತರು ತಮ್ಮ ಜಮೀನಿನ ಮಣ್ಣಿನಲ್ಲಿರುವ ಪೋಷಕಾಂಶಗಳ ಸ್ಥಿತಿಗತಿ ಅರಿಯಲು ಸಹಾಯವಾಗುತ್ತದೆ.

<><><><>

ಹಮಾಸ್ ಜೊತೆಗಿನ ೨ನೇ ಹಂತದ ಕದನ ವಿರಾಮಕ್ಕಾಗಿ ಮಾತುಕತೆಗಳನ್ನು ಮುಂದುವರೆಸಲು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು, ಮಾತುಕತೆ ನೇತೃತ್ವ ವಹಿಸಲು ರಾನ್ ಡೆರ್ಮರ್ ಅವರನ್ನು ನೇಮಿಸಿದ್ದಾರೆ.

ಅಮೆರಿದಲ್ಲಿ ಜನಿಸಿದ ರಾನ್ ಡೆರ್ಮರ್, ನೇತನ್ಯಾಹು ಅವರ ಆಪ್ತ ಸಲಹೆಗಾರರು ಎಂಬ ಅಂಶ ಜನಜನಿತವಾಗಿದೆ.

<><><><>

ಪುದುಚೇರಿ ರಾಜ್ಯ ಸರ್ಕಾರ ಅಂಗಾಂಗ ದಾನಿಗಳಿಗೆ ಜೀವ ಉಳಿಸಿದ ಕೊಡುಗೆಗಾಗಿ ಅವರಿಗೆ ರಾಜ್ಯ ಗೌರವ ನೀಡಲು ನಿರ್ಧರಿಸಿದೆ. ಈ ಸಂಬಂಧ ಉಪಕ್ರಮವನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ರೂಪಿಸಲಾಗಿದೆ. ಮೆದುಳು ನಿಷ್ಕ್ರಿಯ ಪ್ರಕರಣಗಳನ್ನು ಜಿಲ್ಲಾಧಿಕಾರಿಗಳು ಮತ್ತು ಪ್ರಾದೇಶಿಕ ಆಡಳಿತಗಾರರಿಗೆ ತಕ್ಷಣ ವರದಿ ಮಾಡುವಂತೆ ಸರ್ಕಾರ ಆಸ್ಪತ್ರೆಗಳಿಗೆ ನಿರ್ದೇಶನ ನೀಡಿದೆ. ಹೊಸ ಮಾರ್ಗಸೂಚಿಗಳ ಪ್ರಕಾರ, ಜಿಲ್ಲಾಧಿಕಾರಿಗಳು ಮತ್ತು ಪ್ರಾದೇಶಿಕ ಆಡಳಿತಗಾರರು ಅಂಗಾಂಗ ದಾನಿಗಳ ನಿವಾಸಗಳಿಗೆ ಭೇಟಿ ನೀಡಿ ಗೌರವ ಸಲ್ಲಿಸುತ್ತಾರೆ. ಹೆಚ್ಚುವರಿಯಾಗಿ, ಗಣರಾಜ್ಯೋತ್ಸವ ಮತ್ತು ಸ್ವಾತಂತ್ರ್ಯ ದಿನಾಚರಣೆಯಂತಹ ಸಂದರ್ಭಗಳಲ್ಲಿ, ಲೆಫ್ಟಿನೆಂಟ್ ಗವರ್ನರ್ ಅಥವಾ ಮುಖ್ಯಮಂತ್ರಿ ಅಂಗಾಂಗ ದಾನಿಗಳ ಕುಟುಂಬಗಳನ್ನು ಅಧಿಕೃತ ಕಾರ್ಯಕ್ರಮಗಳಿಗೆ ಆಹ್ವಾನಿಸಿ, ಸಾರ್ವಜನಿಕವಾಗಿ ಗೌರವಿಸಲಿದ್ದಾರೆ.

<><><><>

ದಕ್ಷಿಣಆಫ್ರಿಕಾದ ಪೋರ್ಟ್ ಎಲಿಜಬತ್‌ನಲ್ಲಿ ಕಳೆದ ಮಂಗಳವಾರ ಪ್ರಾರಂಭವಾದ ದಕ್ಷಿಣಆಫ್ರಿಕಾ ಅಧ್ಯಕ್ಷತೆಯ ಮೊದಲ ಜಿ-೨೦ ಕಾರ್ಮಿಕರ ಕಾರ್ಯಗುಂಪು - ಇಡಬ್ಲ್ಯೂಜಿ ಸಭೆಯಲ್ಲಿ ಭಾರತೀಯ ನಿಯೋಗದ ನೇತೃತ್ವವನ್ನು ಕಾರ್ಮಿಕ ಮತ್ತು ಉದ್ಯೋಗ ಕಾರ್ಯದರ್ಶಿ ಸುಮಿತಾ ದಾವ್ರಾ ವಹಿಸಿದ್ದಾರೆ. ಸಭೆಯಲ್ಲಿ ಕಾರ್ಯದರ್ಶಿ, ಉದ್ಯೋಗ ಸೃಷ್ಟಿ, ಕಾರ್ಮಿಕ ಮಾರುಕಟ್ಟೆ ಹಾಗೂ ಸಮಗ್ರ ಸಾಮಾಜಿಕ ಭದ್ರತೆಯನ್ನು ಗುರಿಯಾಗಿಟ್ಟುಕೊಂಡು ಭಾರತ ಪ್ರಮುಖ ಸುಧಾರಣೆಗಳನ್ನು ಕೈಗೊಂಡಿದೆ ಎಂದು ವಿವರಿಸಿದರು. ಇ-ಶ್ರಮ್ ಪೋರ್ಟಲ್‌ನಲ್ಲಿ ೩೦೦ ದಶಲಕ್ಷಕ್ಕಿಂತಲೂ ಹೆಚ್ಚು ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದೆ. ಇಎಸ್‌ಐಸಿ ಹಾಗೂ ಇಪಿಎಫ್‌ಒ ಯೋಜನೆಗಳ ಆಧುನೀಕರಣ ಕುರಿತು ಅವರು ವಿವರಿಸಿದ್ದಾರೆ. ಭಾರತದಲ್ಲಿ ಔಪಚಾರಿಕ ವಲಯದಲ್ಲಿ ಉದ್ಯೋಗ ಉತ್ತೇಜಿಸಲು ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆಯನ್ನು ಪ್ರಮುಖ ಉಪಕ್ರಮವಾಗಿ ಜಾರಿಗೊಳಿಸಲಾಗಿದೆ ಎಂದು ಹೇಳಿದರು. ಮಾಹಿತಿ ತಂತ್ರಜ್ಞಾನ, ಸಂಶೋಧನೆ ಹಾಗೂ ಅಭಿವೃದ್ಧಿ,

ಇಂಜಿನಿಯರಿಂಗ್ ಅಂತಹ ಉನ್ನತ ವಲಯಗಳಲ್ಲಿ ಭಾರತದಲ್ಲಿ ಹೆಚ್ಚುತ್ತಿರುವ ಮಹಿಳೆಯರ ಪಾಲ್ಗೊಳ್ಳುವಿಕೆ ಆರ್ಥಿಕ ಬೆಳವಣಿಗೆಯಲ್ಲಿ ನಿರ್ಣಾಯಕ ಅಂಶವಾಗಿದೆ ಎಂದು ವಿಶ್ಲೇಷಿಸಿದರು.

<><><>

ಗಾಜಾದಿಂದ ಇಂದು ಬಿಡುಗಡೆ ಮಾಡಲಾಗುವ ಮೃತ ಒತ್ತೆಯಾಳುಗಳ ಪಟ್ಟಿಯನ್ನು ಇಸ್ರೇಲ್ ಸ್ವೀಕರಿಸಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿ ನಿನ್ನೆ ಹೇಳಿಕೆಯಲ್ಲಿ ತಿಳಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಇಸ್ರೇಲ್ ರಕ್ಷಣಾ ಪಡೆಗಳ ಪ್ರತಿನಿಧಿಗಳ ಮೂಲಕ ಒತ್ತೆಯಾಳುಗಳ ಕುಟುಂಬಗಳ ಮಾಹಿತಿಯನ್ನು ನವೀಕರಿಸಿದೆ ಎಂದು ಪ್ರಧಾನಿ ಕಾರ್ಯಾಲಯ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಇಸ್ರೇಲ್ ನಾಲ್ವರು ಒತ್ತೆಯಾಳುಗಳ ಮೃತದೇಹಗಳನ್ನು ಮನೆಗೆ ಸಾಗಿಸಲು ಸಿದ್ಧತೆ ನಡೆಸುತ್ತಿರುವುದರಿಂದ, ಆ ದಿನವು ದೇಶಕ್ಕೆ ತುಂಬಲಾರದ ನಷ್ಟ ಎಂದು ಒಪ್ಪಿಕೊಂಡಿದ್ದಾರೆ.

<><><>

ಭುವನೇಶ್ವರದ ಕೆಐಐಟಿ ವಿಶ್ವವಿದ್ಯಾಲಯದಲ್ಲಿ ನೇಪಾಳದ ವಿದ್ಯಾರ್ಥಿಯ ಆತ್ಮಹತ್ಯೆ ಪ್ರಕರಣದಲ್ಲಿ ನ್ಯಾಯ ಒದಗಿಸಲಾಗುವುದು ಎಂದು ಒಡಿಶಾ ಮುಖ್ಯಮಂತ್ರಿ ಮೋಹನ್‌ಚರಣ್ ಮಾಝಿ, ನೇಪಾಳ ರಾಯಭಾರಿ ಕಚೇರಿಗೆ ಭರವಸೆ ನೀಡಿದ್ದಾರೆ. ಮುಖ್ಯಮಂತ್ರಿ ಮಾಝಿ, ನಿನ್ನೆ ನೇಪಾಳ ರಾಯಭಾರಿಯ ಕಚೇರಿಯ ಇಬ್ಬರು ರಾಯಭಾರಿಗಳೊಂದಿಗೆ ಈ ಸಂಬಂಧ ಮಾತನಾಡಿದರು. ನೂರಾರು ನೇಪಾಳಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕೆಐಐಟಿ ಕ್ಯಾಂಪಸ್‌ನಲ್ಲಿ ಶಾಂತಿ ಹಾಗೂ ಸಹಜ ಸ್ಥಿತಿಯನ್ನು ಪುನರ್‌ಸ್ಥಾಪಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

<><><>

ಪಾಕಿಸ್ತಾನದ ಕರಾಚಿಯಲ್ಲಿ ನಿನ್ನೆ ನಡೆದ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಒಂಬತ್ತನೇ ಆವೃತ್ತಿಯ ಉದ್ಘಾಟನಾ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ, ಹಾಲಿ ಚಾಂಪಿಯನ್ ಪಾಕಿಸ್ತಾನವನ್ನು ೬೦ ರನ್‌ಗಳಿಂದ ಸೋಲಿಸುವುದರೊಂದಿಗೆ ಭರ್ಜರಿ ಆರಂಭ ಮಾಡಿದೆ. ಟಾಸ್ ಗೆದ್ದ ನಂತರ ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ತಂಡ ಕಿವೀಸ್ ತಂಡವನ್ನು ನಿಯಂತ್ರಿಸಲು ಹೆಣಗಾಡಿತು. ಕಿವೀಸ್ ತಂಡ ೫೦ ಓವರ್‌ಗಳಲ್ಲಿ ೫ ವಿಕೆಟ್‌ಗಳಿಗೆ ೩೨೦ ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಟಾಮ್ ಲ್ಯಾಥಮ್ ೧೧೮ ರನ್, ವಿಲ್ ಯಂಗ್ ೧೦೭ ರನ್, ಗ್ಲೆನ್ ಫಿಲಿಪ್ಸ್ ಕೇವಲ ೩೯ ಎಸೆತಗಳಲ್ಲಿ ೬೧ ರನ್ ಸೇರಿಸಿದರು, ನ್ಯೂಜಿಲೆಂಡ್ ಕೊನೆಯ ೧೦ ಓವರ್‌ಗಳಲ್ಲಿ ೧೧೩ ರನ್‌ಗಳನ್ನು ಗಳಿಸಿತು. ಇದಕ್ಕೆ ಉತ್ತರವಾಗಿ, ಪಾಕಿಸ್ತಾನ ೪೭.೨ ಓವರ್‌ಗಳಲ್ಲಿ ೨೬೦ ರನ್‌ಗಳಿಗೆ ಆಲೌಟ್ ಆಯಿತು. ಬಾಬರ್ ಅಜಮ್ ೬೪ ರನ್‌ಗಳು ಮತ್ತು ಖುಷ್ದಿಲ್ ಶಾ ೬೯ ರನ್‌ಗಳಿಸಿದರು. ನಾಯಕ ಮಿಚೆಲ್ ಸ್ಯಾಂಟ್ನರ್ ಹಾಗೂ ವಿಲಿಯಂ ಒ'ರೂರ್ಕ್ ತಲಾ ಮೂರು ವಿಕೆಟ್ ಪಡೆದು ನ್ಯೂಜಿಲೆಂಡ್ ಗೆಲುವಿಗೆ ನೆರವಾದರು. ಟಾಮ್ ಲ್ಯಾಥಮ್ ಅವರನ್ನು ಪಂದ್ಯ ಶ್ರೇಷ್ಠ ಎಂದು ಘೋಷಿಸಲಾಯಿತು. ರೋಹಿತ್ ಶರ್ಮಾ ನೇತೃತ್ವದ ಭಾರತ ಕ್ರಿಕೆಟ್ ತಂಡ ಇಂದು ಮಧ್ಯಾಹ್ನ

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨.೩೦ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>